# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೪ಎ<br>Part – IVA | ಬೆಂಗಳೂರು, ಶುಕ್ರವಾರ, ೦೬, ಫೆಬ್ರವರಿ, ೨೦೨೬(ಮಾಘ, ೧೭, ಶಕವರ್ಷ, ೧೯೪೭)<br>BENGALURU, FRIDAY, 06, FEBRUARY, 2026(MAGHA, 17, SHAKAVARSHA, 1947) | ನಂ. ೧೩೮<br>No. 138 |
|---|---|---|

## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 61 ಸೇವನೆ 2024

ಕರ್ನಾಟಕ ಸರ್ಕಾರ ಸಚಿವಾಲಯ,
ವಿಧಾನ ಸೌಧ,
ಡಾ॥ಬಿ.ಆರ್.ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ: 06.02.2026

### ಅಧಿಸೂಚನೆ

ಕರ್ನಾಟಕ ರಾಜ್ಯ ನಾಗರಿಕ ಸೇವಾ ಅಧಿನಿಯಮ, 1978(1990 ರ ಕರ್ನಾಟಕ ಅಧಿನಿಯಮ 14) 8ನೇ ಪ್ರಕರಣದೊಂದಿಗೆ ಓದಲಾದಂತೆ, 3ನೇ ಪ್ರಕರಣದ (1)ನೇ ಉಪ-ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ರಚಿಸಿರುವ ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು, 2000ಕ್ಕೆ ಮತ್ತಷ್ಟು ತಿದ್ದುಪಡಿ ಮಾಡುವ ಸಲುವಾಗಿ ಈ ಕೆಳಗಿನ ನಿಯಮಗಳ ಕರಡನ್ನು, ಸದರಿ ಅಧಿನಿಯಮದ 3ನೇ ಪ್ರಕರಣದ (2)ನೇ ಉಪ ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ ಇದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳ ಮಾಹಿತಿಗಾಗಿ, ಈ ಮೂಲಕ ಪ್ರಕಟಿಸಲಾಗಿದೆ ಮತ್ತು ಸದರಿ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟಗೊಂಡ ದಿನಾಂಕದಿಂದ ಹದಿನೈದು ದಿನಗಳ ನಂತರ ಪರಿಗಣನೆಗೆ ತೆಗೆದುಕೊಳ್ಳಲಾಗುವುದೆಂದು ಈ ಮೂಲಕ ಸೂಚಿಸಲಾಗಿದೆ.

ಸದರಿ ಕರಡು ನಿಯಮಗಳಿಗೆ ಸಂಬಂಧಪಟ್ಟಂತೆ ಮೇಲೆ ಗೊತ್ತುಪಡಿಸಿದ ಅವಧಿ ಕೊನೆಗೊಳ್ಳುವ ಮುಂಚೆ ಯಾವುದೇ ವ್ಯಕ್ತಿಯಿಂದ ರಾಜ್ಯ ಸರ್ಕಾರವು ಸ್ವೀಕರಿಸಬಹುದಾದ ಯಾವುದೇ ಆಕ್ಷೇಪಣೆ ಅಥವಾ ಸಲಹೆಯನ್ನು ರಾಜ್ಯ ಸರ್ಕಾರವು ಪರಿಗಣಿಸುತ್ತದೆ. ಆಕ್ಷೇಪಣೆಗಳು ಅಥವಾ ಸಲಹೆಗಳನ್ನು ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ವಿಧಾನ ಸೌಧ, ಡಾ॥ ಬಿ.ಆರ್ ಅಂಬೇಡ್ಕರ್ ವೀದಿ, ಬೆಂಗಳೂರು-560001 ಇವರಿಗೆ ಸಲ್ಲಿಸತಕ್ಕದ್ದು.

## ಕರಡು ನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) (ತಿದ್ದುಪಡಿ) ನಿಯಮಗಳು, 2026 ಎಂದು ಕರೆಯತಕ್ಕದ್ದು.

(2) ಇವು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 10ಎ ರ ಸೇರ್ಪಡೆ.-** ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು, 2000ರ ನಿಯಮ 10ರ ನಂತರ, ಈ ಕೆಳಕಂಡದ್ದನ್ನು ಸೇರಿಸತಕ್ಕದ್ದು.

**10ಎ, ಪರಾಮರ್ಶೆ ಸಮಿತಿ**: ರಾಜ್ಯ ನಾಗರಿಕ ಸೇವೆಗಳ ಗ್ರೂಪ್ –ಎ ವೃಂದದ ಅಧಿಕಾರಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳಲ್ಲಿ ನೀಡಿರುವ ಶ್ರೇಣಿಯನ್ನು ಮೇಲ್ದರ್ಜೆಗೇರಿಸಲು ಅಧಿಕಾರಿಗಳು ಸಲ್ಲಿಸುವ ಮನವಿಗಳನ್ನು ಪರಿಗಣಿಸಲು ಮತ್ತು ಕಾರ್ಯನಿರ್ವಹಣಾ ವರದಿಯಲ್ಲಿ ನೀಡಿರುವ ಶ್ರೇಣಿಯನ್ನು (Grading) ಪರಾಮರ್ಶಿಸಲು ಈ ಕೆಳಕಂಡ ಸದಸ್ಯರುಗಳನ್ನು ಒಳಗೊಂಡ ಪರಾಮರ್ಶೆ ಸಮಿತಿಯನ್ನು ರಚಿಸಿದೆ.

| | | |
|---|---|---|
| 1. | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು | ಅಧ್ಯಕ್ಷರು |
| 2. | ಸಚಿವಾಲಯದ ಸಂಬಂಧಿಸಿದ ಆಡಳಿತ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ | ಸದಸ್ಯರು |
| 3. | ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ. | ಸದಸ್ಯರು |
| 4. | ಸಚಿವಾಲಯದ ಸಂಬಂಧಿಸಿದ ಆಡಳಿತ ಇಲಾಖೆಯ ಸರ್ಕಾರದ ಉಪ ಕಾರ್ಯದರ್ಶಿ | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪ್ರತಿಭಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-3)

# GOVERNMENT OF KARNATAKA

No. DPAR 61 SCR 2024

Karnataka Government Secretariat,
Vidhana Soudha,
Dr. B.R Ambedkar Veedhi,
Bengaluru, dated: 06.02.2026

## NOTIFICATION

The draft of the following rules further to amend the Karnataka Civil Services (Performance Reports) Rules, 2000 which the Government of Karnataka proposes to make in exercise of the powers conferred by sub-section (1) of section 3 read with section 8 of the Karnataka State Civil Services Act, 1978 (Karnataka Act 14 of 1990) is hereby published as required by clause (a) of sub-section (2) of section 3 of the said Act, for the information of all persons likely to be affected thereby and notice is hereby given that the said draft will be taken into consideration after the expiry of fifteen days from the date of its publication in Official Gazette.

Any objection or suggestion which may be received by the State Government from any person with respect to the said draft before the expiry of the period specified above will be considered by the State Government. Objections and suggestions may be addressed to the Secretary to Government, Department of Personnel and Administrative Reforms, Vidhana Soudha, Dr. B.R. Ambedkar Veedhi, Bangalore-560 001.

## DRAFT RULES

1. **Title and Commencement.-** (1) These rules may be called the Karnataka Civil Services (Performance Reports) (Amendment) Rules, 2026.

(2) They shall come into force from the date of their final publication in the official Gazette.

**2. Insertion of Rule 10A –** In the Karnataka Civil Services (Performance Reports) Rules, 2000, after Rule 10 the following shall be inserted, namely :

**10A. Review Committee:-** To consider the applications submitted by the officers belonging to Group-A cadre of the State Civil Services for the upgradation of grading awarded in their Annual Performance Reports (APRs), and to review the grading given in the performance reports, a Review Committee is hereby constituted consisting of the following members, namely:-

| | | |
|---|---|---|
| 1. | The Additional Chief Secretary to Government | Chairperson |
| 2. | The Additional Chief Secretary / Principal Secretary / Secretary of the concerned Administrative Department in the Secretariat | Member |

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



| | | |
|---|---|---|
| 3. | The Secretary to Government, Department of Personnel and Administrative Reforms. | Member |
| 4. | Deputy Secretary to Government of the concerned Administrative Department in the Secretariat | Member-Secretary |

By Order and in the name of the
Governor of Karnataka

(Prathibha.K)
Under Secretary to Government
Department of Personnel and
Administrative Reforms,
(Service Rules-3).

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH